ಅ) ಬೆಳೆ ಪರಿಹಾರ ಪಾವತಿ ಮಾಡುವ ಬಗ್ಗೆ ಲೋಕೋಪಯೋಗಿ ಇಲಾಖೆಯವರಿಗೆ ಸಂಬಂಧಿಸಿರುವುದರಿಂದ ವಿಳಂಬದ ಬಗ್ಗೆ ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ. ಜಮೀನಿನ ಪರಿಹಾರದ ಬಗ್ಗೆ ಭೂಸ್ವಾಧೀನ ನಡವಳಿಕೆ ಪೂರ್ಣಗೊಂಡ ನಂತರ ಪರಿಹಾರ ನೀಡಲಾಗುತ್ತಿದ್ದು, ಈಗಾಗಲೇ 43 ಪ್ರಕರಣಗಳಲ್ಲಿ ರೂ.1,71,44,795.00ಗಳನ್ನು ಪರಿಹಾರ ನೀಡಲಾಗಿದೆ. ಆದ್ದರಿಂದ ಜಮೀನಿನ ಪರಿಹಾರ ನೀಡುವಲ್ಲಿ ಯಾವುದೇ ವಿಳಂಬವಾಗಿಲ್ಲ.

ಆ) ಉದ್ಭವಿಸುವುದಿಲ್ಲ.

ಹಾಸನ ಜಿಲ್ಲೆಯ ಆಲೂಗಡ್ಡೆ ಬೆಳೆಗಾರರ ಹಿತರಕ್ಷಣೆ

1706 - ಶ್ರೀ ಎ.ಟಿ. ರಾಮಸ್ವಾಮಿ (ಅರಕಲಗೂಡು) : ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆಯಲ್ಲಿ ಆಲೂಗಡ್ಡೆ ಬೆಳೆಯನ್ನು ಪ್ರಮುಖವಾಗಿ ಬೆಳೆಯುವ ಬೆಳೆಗಾರರ ಹಿತರಕ್ಷಣೆಗಾಗಿ ಹಾಸನ ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ಶೀತಲ ಗೃಹ ನಿರ್ಮಾಣ ಮಾಡುವ ಉದ್ದೇಶವೇನಾದರೂ ಸರ್ಕಾರಕ್ಕಿದೆಯೇ?

ಆ) ಹಾಗಿದ್ದಲ್ಲಿ ಶೀತಲ ಗೃಹ ನಿರ್ಮಾಣ ಮಾಡಲು ಉದ್ದೇಶಿಸಿರುವ ಸ್ಥಳಗಳು ಯಾವುವು ಮತ್ತು ಅವುಗಳನ್ನು ಯಾವಾಗ ಮಾಡಲಾಗುತ್ತದೆ?

ಇ) ಆಲೂಗಡ್ಡೆ ಬೆಳೆ ಧಾರಣೆಯ ಕುಸಿತವನ್ನು ತಡೆಗಟ್ಟಲು ಸರ್ಕಾರದವರು ಕ್ರಮವೇನಾದರೂ ಕೈಗೊಳ್ಳುವರೇ?

ಶ್ರೀ ಜೆ. ಪುಟ್ಟಸ್ವಾಮಿಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು):

ಅ) ಇಲ್ಲ. ಆದರೆ ಹಾಸನ ನಗರದಲ್ಲಿ ಈಗಾಗಲೇ 120 ಮೆಟ್ರಿಕ್ ಟನ್ ಸಾಮರ್ಥ್ಯವುಳ್ಳ ಒಂದು ಶೀತಲಗೃಹ ಕಾರ್ಯಾಚರಣೆಯಲ್ಲಿದೆ. ಇದನ್ನು ಆಲೂಗಡ್ಡೆ ಶೇಖರಣೆಗಾಗಿ ಉಪಯೋಗಿಸಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಇ) ಆಲೂಗಡ್ಡೆ ಉತ್ಪನ್ನದ ಬೆಲೆಯು ಬಹಳಷ್ಟು ಕುಸಿದಾಗ ಆಲೂಗಡ್ಡೆಯನ್ನು ಕೊಳ್ಳಲು ಕರ್ನಾಟಕ ರಾಜ್ಯ ಸಹಕಾರಿ ಮಾರಾಟ ಮಹಾ ಮಂಡಲದವರಿಗೆ ಸೂಚನೆ ನೀಡಲಾಗಿದೆ.

ಬಾದಾಮಿ ನಗರದ ಮಕಾನದಲ್ಲಿ ಕುಡಿಯುವ ನೀರಿನ ತೊಂದರೆಗಳ ಬಗ್ಗೆ

1733 - ಶ್ರೀ ಎಂ.ಕೆ. ಪಟ್ಟಣ ಶೆಟ್ಟಿ (ಬಾದಮಿ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾದಾಮಿ ನಗರದ "ಮಕಾನ್"ದಲ್ಲಿ ಕುಡಿಯುವ ನೀರಿನ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಅದನ್ನು ಸರಿಪಡಿಸಲು ಸರ್ಕಾರದ ಮುಂದಿರುವ ಕ್ರಮಗಳೇನು?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು) :

ಅ) ಹೌದು.

ಆ) ಕೊಳವೆ ಬಾವಿಗಳನ್ನು ತೋಡಿ ಕಿರು ನೀರು ಸರಬರಾಜು ಯೋಜನೆಯಿಂದ ಕುಡಿಯುವ ನೀರನ್ನು ಒದಗಿಸುವ ವಿಷಯವನ್ನು ಪರಿಶೀಲಿಸಲಾಗುವುದು.

ಧಾರ್ಮಿಕ ದತ್ತಿ ಇಲಾಖೆಯಿಂದ ಕೊಡುವ ಧನ ಸಹಾಯದ ಬಗ್ಗೆ

1735 - ಶ್ರೀ ಎಂ.ಕೆ. ಪಟ್ಟಣ ಶೆಟ್ಟಿ (ಬಾದಾಮಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೇ?

ಅ) ಬಾದಾಮಿ ತಾಲ್ಲೂಕಿನ ಸೋಮನಕೊಪ್ಪ ಗ್ರಾಮದ ಪೂರ್ಣಾನಂದ ಮಠವು ಧಾರ್ಮಿಕ ದತ್ತಿ ಕಾಯಿದೆ ಪ್ರಕಾರ ನೋಂದಣಿಯಾಗಿದೆಯೇ?

ಆ) ನೋಂದಣಿಯಾಗಿದ್ದಲ್ಲಿ ಈ ಮಠಕ್ಕೆ ಇಲ್ಲಿಯವರೆಗೆ ಎಷ್ಟು ಹಣವನ್ನು ಸರ್ಕಾರದಿಂದ ಬಿಡುಗಡೆ ಮಾಡಲಾಗಿದೆ.

ಇ) ಬಿಡುಗಡೆ ಮಾಡಲಾಗಿರುವ ಹಣವನ್ನು ಬಳಕೆ ಮಾಡಲಾಗಿದೆಯೇ?

ಈ) ಹಣ ಬಳಕೆಯಾಗಿದ್ದಲ್ಲಿ ಮತ್ತೆ ಹಣವನ್ನು ಬಿಡುಗಡೆ ಮಾಡಲು ಇರುವ ತೊಂದರೆಗಳೇನು?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು) :

ಅ) ಹೌದು.

ಆ) ರೂ. 30,000-00 ಹಿಂದಿನ ಸಾಲಿನಲ್ಲಿ ಬಿಡುಗಡೆಯಾಗಿದ್ದು, 1990-91ನೇ ಸಾಲಿನಲ್ಲಿ ರೂ. 10,000-00 ಬಿಡುಗಡೆ ಮಾಡಲಾಗಿದೆ.

ಇ) ರೂ. 30,000-00 ಬಳಕೆ ಮಾಡಲಾಗಿದೆ.

ಈ) ಯಾವುದೇ ತೊಂದರೆಯಿಲ್ಲ.

ಬಾದಾಮಿ ಪುರಸಭೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ತೊಂದರೆಯ ಬಗ್ಗೆ

1732 - ಶ್ರೀ ಎಂ.ಕೆ. ಪಟ್ಟಣ ಶೆಟ್ಟಿ (ಬಾದಾಮಿ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾದಾಮಿ ತಾಲ್ಲೂಕಿನ ಕೆರೂರಿನ ಸುಮಾರು 20,000 ಜನಕ್ಕೆ ಕುಡಿಯುವ ನೀರಿನ ತೊಂದರೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಆ ತೊಂದರೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರಿ ಕೆ.ಜಿ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):

ಅ) ಹೌದು.

ಆ) ಈ ಕೆಳಕಂಡ ಕಾಮಗಾರಿಗಳನ್ನು ದೊರಕುವ ಹಣ ಆಧಾರಿಸಿ ತೆಗೆದು ಕೊಳ್ಳಲಾಗುವುದು:

1) 3 ಹೆಚ್ಚುವರಿ ನೀರಿನ ಅಸರೆ ಇರುವ ಕೊಳವೆ ಬಾವಿಗಳಿಗೆ ವಿದ್ಯುತ್ ಪಂಪನ್ನು ಅಳವಡಿಸಿ ಅವುಗಳನ್ನು ವಿತರಣಾ ಕೊಳವೆ ಮಾರ್ಗಗಳಿಗೆ ಜೋಡಿಸುವುದು.

2) ಒಂದು ಲಕ್ಷ ಗ್ಯಾಲನ್ ಸಾಮರ್ಥ್ಯದ ಮೇಲ್ಮಟ್ಟದ ಜಲಸಂಗ್ರಹಾಗಾರವನ್ನು ಕಟ್ಟುವುದು.

3) ಬೆಳಗಂಟಿ ಹಳ್ಳಿಗೆ ಒಂದು ಪರ್ಯಾಯ ನೀರಿನ ಕೊಳವೆ ಮಾರ್ಗವನ್ನು ಹಾಕಿ ನೀರು ಸರಬರಾಜು ಮಾಡುವುದು.

ಕೃಷಿ ಕಾರ್ಮಿಕ ಮಹಿಳೆಯರ ಹೆರಿಗೆ ಭತ್ಯೆ ಕುರಿತು

1763 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ : ಮಾನ್ಯ ಕಾನೂನು ಮತ್ತು ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕರ್ನಾಟಕ ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಕಾರ್ಮಿಕ ಮಹಿಳೆಯರಿಗಾಗಿ ಕಾದಿರಿಸಿದ ಅನುದಾನವೆಷ್ಟು? (ಜಿಲ್ಲಾವಾರು, ವರ್ಷವಾರು,ಮೊಬಲಗು ವಿವರ)